# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ

6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03.

ಸಂಖ್ಯೆ:ಎಕ್ಸ್1/ಡ್ರಾ.ಗ್ರೇ.ಪ/ಪ.ಕಾ.ನಿ/05/2023-24 ದಿನಾಂಕ:20/09/2023

**ಸುತ್ತೋಲೆ**

ವಿಷಯ: ನವೆಂಬರ್-2023ರ ಮಾಹೆಯಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ಅಧಿಸೂಚನೆ ಸಂಖ್ಯೆ: ಎಕ್ಸ್1/ಡ್ರಾ.ಗ್ರೇ.ಪ/ಪ.ಕಾ.ನಿ/05/2023-24 ದಿನಾಂಕ:17/08/2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅಧಿಸೂಚನೆಯನ್ವಯ ನವೆಂಬರ್-2023ರ ಮಾಹೆಯಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸಲು ದಿನಾಂಕ:21/08/2023 ರಿಂದ 20/09/2023ರ ವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಆದರೆ ರಾಜ್ಯದ ಕೆಲವು ಪರೀಕ್ಷಾ ಕೇಂದ್ರಗಳಿಂದ ಹಾಗೂ ಪೋಷಕರಿಂದ ಮಂಡಲಿಗೆ ಆನ್‌ಲೈನ್ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲು ದೂರವಾಣಿ ಮೂಲಕ ಕೋರಿಕೆಗಳು ಬಂದ ಹಿನ್ನೆಲೆಯಲ್ಲಿ ಆನ್‌ಲೈನ್ ಅರ್ಜಿಗಳನ್ನು ನೋಂದಾಯಿಸುವ ಹಾಗೂ ಪ್ರಸ್ತಾವನೆಯನ್ನು ಸಲ್ಲಿಸುವ ದಿನಾಂಕಗಳನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

| ಕ್ರಸಂ | ವಿವರ | ಈಗಾಗಲೇ ನಿಗದಿಪಡಿಸಿರುವ ದಿನಾಂಕ | ವಿಸ್ತರಣೆ ಮಾಡಿದ ದಿನಾಂಕ |
|---|---|---|---|
| 01 | ಮಂಡಲಿ ಜಾಲತಾಣದ Center Login ಮೂಲಕ ಅಭ್ಯರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು **ಅಂತಿಮ ದಿನಾಂಕ** | 20/09/2023 | 26/09/2023 |
| 02 | ಮಂಡಲಿ ಜಾಲತಾಣದಲ್ಲಿ ಸಂಬಂಧಿಸಿದ Center Login ಮೂಲಕ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಆನ್‌ಲೈನ್(Debit Card/CreditCard/NetBanking) ಮೂಲಕ ಪಾವತಿಸುವುದು. | 21/09/2023 ರಿಂದ 23/09/2023ರ ವರೆಗೆ | 27/09/2023 ರಿಂದ 30/09/2023ರ ವರೆಗೆ |
| 03 | ಪರೀಕ್ಷಾ ಕೇಂದ್ರದ ಮುಖ್ಯಸ್ಥರು ನಾಮಿನಲ್ ರೋಲ್,ಆನ್‌ಲೈನ್‌ಮೂಲಕ ಶುಲ್ಕ ಪಾವತಿಸಿದ ಸ್ವೀಕೃತಿ ಪತ್ರದ ಪ್ರತಿ ಹಾಗೂ ಸಂಬಂಧಿಸಿದ ಇತರೆ ದಾಖಲೆಗಳನ್ನು ಡಯಟ್‌ಗೆ ಕಳುಹಿಸಲು ಕೊನೆಯ ದಿನಾಂಕ | 26/09/2023 | 03/10/2023 |
| 04 | ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಸಲ್ಲಿಸಿದ ನಾಮಿನಲ್ ರೋಲ್,ಆನ್‌ಲೈನ್‌ಮೂಲಕ ಶುಲ್ಕ ಪಾವತಿಸಿದ ಸ್ವೀಕೃತಿ ಪತ್ರದ ಪ್ರತಿ ಹಾಗೂ ಸಂಬಂಧಿಸಿದ ಇತರೆ ದಾಖಲೆಗಳನ್ನು ಡಯಟ್ ಲಾಗಿನ್‌ನಲ್ಲಿ ಉಪನಿರ್ದೇಶಕರು(ಅಭಿವೃದ್ಧಿ)ರವರು ಅನುಮೋದಿಸುವುದು. | 27/09/2023 ರಿಂದ 30/09/2023ರ ವರೆಗೆ | 03/10/2023 ರಿಂದ 05/10/2023ರ ವರೆಗೆ |
| 05 | ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಸಲ್ಲಿಸಿದ ನಾಮಿನಲ್ ರೋಲ್,ಆನ್‌ಲೈನ್‌ಮೂಲಕ ಶುಲ್ಕ ಪಾವತಿಸಿದ ಸ್ವೀಕೃತಿ ಪತ್ರದ ಪ್ರತಿ ಹಾಗೂ ಸಂಬಂಧಿಸಿದ ಇತರೆ ದಾಖಲೆಗಳನ್ನು ಡಯಟ್‌ನಿಂದ ಮಂಡಲಿಗೆ ಕಳುಹಿಸಲು ಕೊನೆಯ ದಿನಾಂಕ | 04/10/2023 | 07/10/2023 |

ಸುತ್ತೋಲೆಯಲ್ಲಿ ನಿಗದಿಪಡಿಸಿರುವ ದಿನಾಂಕಗಳನ್ವಯ ವಿದ್ಯಾರ್ಥಿಗಳಿಂದ ಆನ್‌ಲೈನ್‌ಮುಖಾಂತರ ಅರ್ಜಿಗಳನ್ನು ನೋಂದಣಿ ಮಾಡಲು ಹಾಗೂ ಶುಲ್ಕ ಸ್ವೀಕರಿಸಲು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಡ್ರಾಯಿಂಗ್ ಗ್ರೇಡ್ ಪರೀಕ್ಷಾ ಕೇಂದ್ರದ ಮುಖ್ಯಸ್ಥರ ಗಮನಕ್ಕೆ ತಂದು, ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಡಯಟ್ ಪ್ರಾಂಶುಪಾಲರು ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

20/9/2023

[ಗೋಪಾಲಕೃಷ್ಣ ಹೆಚ್.ಎನ್]
ನಿರ್ದೇಶಕರು (ಪರೀಕ್ಷೆಗಳು)

ಗೆ,
ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರಿಗೆ ಮತ್ತು ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೆ ಸೂಕ್ತ ಕ್ರಮಕ್ಕಾಗಿ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ರವರಿಗೆ ಮಾಹಿತಿಗಾಗಿ.
3. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಹೊಸಕೆರೆಹಳ್ಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ವಿಭಾಗೀಯ ಸಹನಿರ್ದೇಶಕರು ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ವಿಭಾಗದವರಿಗೆ ಸೂಕ್ತ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಶಾಲಾ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
6. ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸೂಕ್ತ ಕ್ರಮಕ್ಕಾಗಿ.
7. ಹಿರಿಯ ಸಹಾಯಕ ನಿರ್ದೇಶಕರು (ಚಿತ್ರಕಲೆ) ಆಯುಕ್ತರ ಕಛೇರಿ, ಬೆಂಗಳೂರು, ವಿಭಾಗೀಯ ಆಯುಕ್ತರ ಕಛೇರಿ, ಧಾರವಾಡ, ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
8. ಶಾಖಾಧಿಕಾರಿಗಳು, ಗಣಕ ಶಾಖೆ ರವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.